ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಹದಿಮೂರನೇ ಅಧಿವೇಶನ)

(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 23ನೇ ಮಾರ್ಚ್, 2017

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ
ಆ) ತಡೆಹಿಡಿಯಲಾದ ಪ್ರಶ್ನೆಗಳು :-		
1) ದಿನಾಂಕ:16.03.2017ರ ಐದನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಬಸವರಾಜ್ ಎಸ್. ಬೊಮ್ಮಾಯಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 61 (769)	:	ಮಾಹಿತಿ ತಂತ್ರಜ್ಞಾನ, ಜೈವಿಕ ವ್ಯವಸ್ಥೆ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು
2) ದಿನಾಂಕ:16.03.2017ರ ಐದನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಎಂ. ನರೇಂದ್ರ ಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 65 (759)	:	ಮಾಹಿತಿ ತಂತ್ರಜ್ಞಾನ, ಜೈವಿಕ ವ್ಯವಸ್ಥೆ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2016ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿಯನ್ನು (2017ನೇ ವರ್ಷದ ವರದಿ ಸಂಖ್ಯೆ-4) ಸಭೆಯ ಮುಂದಿಡುವುದು.

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2016–17ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ 13ನೇ ವರದಿಯನ್ನೊಪ್ಪಿಸುವುದು.

4. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

ಶ್ರೀ ಸಂತೋಷ್ ಎಸ್. ಲಾಡ್ (ಕಾರ್ಮಿಕ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:–**

ಅ) 2017ನೇ ಸಾಲಿನ ಅಂತರ್ – ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು :–**

ಅ) 2016ನೇ ಸಾಲಿನ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಶ್ರೀ ಬಸವರಾಜ ರಾಯರಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಶ್ರೀ ಬಸವರಾಜ ರಾಯರಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7. ಶ್ರೀ ಸಂತೋಷ್ ಎಸ್.ಲಾಡ್ (ಕಾರ್ಮಿಕ ಸಚಿವರು) ಅವರು :–

ಅ) 2017ನೇ ಸಾಲಿನ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

III. ವಿಧೇಯಕವನ್ನು ಪುನರ್‌ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ತನ್ವೀರ್ ಸೇಠ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು :–

ಅ) ಕರ್ನಾಟಕ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಡನೆ ಅಂಗೀಕಾರವಾದ ರೂಪದಲ್ಲಿ 2017ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ವಿತ್ತೀಯ ಕಾರ್ಯಕಲಾಪಗಳು

"2017–18ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ" .

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಲಕ್ಷ್ಮಣ ಸಂಗಪ್ಪ ಸವದಿ, ಡಿ.ಎನ್ ಜೀವರಾಜ್, ಕೆ.ಜಿ. ಬೋಪಯ್ಯ ಮತ್ತು ವಿಶ್ವೇಶ್ವರ ಹೆಗಡೆ ಕಾಗೇರಿ** ಇವರುಗಳು – ರಾಜ್ಯದಲ್ಲಿ ಬರಗಾಲದ ತೀವ್ರತೆ ಕುರಿತು ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಯು.ಬಿ. ಬಣಕಾರ, ಡಾ॥ ವಿಶ್ವನಾಥ ಈ ಪಾಟೀಲ, ಅರವಿಂದ ಚಂದ್ರಕಾಂತ ಬೆಲ್ಲದ** ಇವರುಗಳು – ರಾಜ್ಯದ ಪ್ರಾಥಮಿಕ ಸಹಕಾರಿ ಭೂ–ಅಭಿವೃದ್ಧಿ ಬ್ಯಾಂಕ್‌ಗಳಲ್ಲಿ (ಪಿಎಲ್‌ಡಿ) ರೈತರಿಗೆ ದ್ವಿಚಕ್ರ ವಾಹನ ಖರೀದಿಗೆ ಶೇ. 3ರ ಬಡ್ಡಿ ದರದಲ್ಲಿ ಸಾಲ ನೀಡಿದ್ದು, ಪ್ರಸ್ತುತ ಶೇ. 14ರ ಬಡ್ಡಿ ದರವನ್ನು ಏರಿಕೆ ಮಾಡಿರುವುದರಿಂದ ರೈತರಿಗೆ ತೊಂದರೆಯಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಬಿ.ಆರ್. ಪಾಟೀಲ್ ಮತ್ತು ಜಮೀರ್ ಅಹ್ಮದ್ ಖಾನ್** ಇವರುಗಳು – ಮಂಗಳೂರು ತಾಲ್ಲೂಕಿನ ಪೆರ್ಮುದೆ ಮತ್ತು ಕುತ್ತೆತ್ತೂರು ಗ್ರಾಮಗಳ ಸುಮಾರು 830 ಎಕರೆ ಫಲವತ್ತಾದ ಕೃಷಿ ನೀರಾವರಿ ಭೂಮಿಯನ್ನು ಕೆ.ಐ.ಎ.ಡಿ.ಬಿ. ರವರು ವಶಪಡಿಸಿಕೊಳ್ಳಲು ರೈತರಿಗೆ ನೋಟೀಸ್ ನೀಡಿರುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. **ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ, ಸಿ.ಎನ್. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಮತ್ತು ಹೆಚ್.ಎಸ್. ಪ್ರಕಾಶ್** ಇವರುಗಳು – ರಾಜ್ಯದಲ್ಲಿ ಕೊಬ್ಬರಿ ಮತ್ತು ತೆಂಗಿನಕಾಯಿಯ ದರಗಳು ಕನಿಷ್ಠ ಮಟ್ಟಕ್ಕೆ ಕುಸಿದಿರುವುದರಿಂದ ತೆಂಗು ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟದಲ್ಲಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. **ಶ್ರೀಯುತರುಗಳಾದ ಆರ್. ಅಶೋಕ, ಅರವಿಂದ ಲಿಂಬಾವಳಿ, ಎಂ. ಕೃಷ್ಣಪ್ಪ, ಮುನಿರಾಜು, ಎಸ್. ಸುರೇಶ್‌ಕುಮಾರ್ ಮತ್ತು** ಇತರರು – ಬೆಂಗಳೂರು ನಗರದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಹೆಚ್ಚುತ್ತಿರುವ ರೌಡಿಗಳ ಗ್ಯಾಂಗ್‌ವಾರ್, ಮಹಿಳೆಯರು – ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಡ್ರಗ್ಸ್ ಹಾವಳಿ, ಬಿಟ್ ಕಾಯಿನ್ ದಂಧೆ ಇತ್ಯಾದಿ ಪ್ರಕರಣಗಳನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ವಿಫಲವಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

6. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಡಿ.ಎನ್. ಜೀವರಾಜ್, ವಿಶ್ವೇಶ್ವರ ಹೆಗಡೆ ಕಾಗೇರಿ, ಐಹೊಳೆ ದುರ್ಯೋಧನ್ ಮಹಾಲಿಂಗಪ್ಪ** ಇವರುಗಳು – ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕೃಷ್ಣಾ ನದಿ ದಂಡೆಯ ಮೇಲಿರುವ ಹಿಪ್ಪರಗಿ ಹಿನ್ನೀರಿನ ಮುಳುಗಡೆ ಗ್ರಾಮವಾದ ಸಪ್ತಸಾಗರ ಗ್ರಾಮದ ಜನರಿಗೆ ಸರ್ಕಾರದಿಂದ ಪರಿಹಾರ ಮೊತ್ತ, ವಿವಿಧ ವಸತಿ ಯೋಜನೆಗಳ ಸೌಲಭ್ಯಗಳು ಮತ್ತು ಸರಿಯಾದ ರಸ್ತೆಗಳು ಇಲ್ಲದೇ ತೊಂದರೆಯುಂಟಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. **ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಅರವಿಂದ ಚಂದ್ರಕಾತ ಬೆಲ್ಲದ, ಲಕ್ಷ್ಮಣ ಸಂಗಪ್ಪ ಸವದಿ ಮತ್ತು ಸಿ.ಟಿ. ರವಿ ಇವರುಗಳು** – ಅಗ್ರಿಗೋಲ್ಡ್ ಸಮೂಹ ಸಂಸ್ಥೆಗಳು ಕಾನೂನುಬಾಹಿರವಾಗಿ ಗ್ರಾಹಕರ ಹಣವನ್ನು ವೈಯುಕ್ತಿಕ ಹಿತಾಸಕ್ತಿಗೆ ವಿನಿಯೋಗಿಸಿ ವಂಚಿಸಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. **ಶ್ರೀಯುತರುಗಳಾದ ಪಿ. ರಾಜೀವ್, ವಡ್ನಾಳ್ ರಾಜಣ್ಣ, ಡಿ.ಜಿ. ಶಾಂತನಗೌಡ, ಪಿ.ಟಿ. ಪರಮೇಶ್ವರ್ ನಾಯ್ಕ್, ಬಸವರಾಜ ಬೊಮ್ಮಾಯಿ ಮತ್ತು** ಇತರರು – ರಾಜ್ಯದಲ್ಲಿ ಖಾಸಗೀ ಆಸ್ಪತ್ರೆಗಳ ಹಾವಳಿಯಿಂದ ಹಾಗೂ ಆರೋಗ್ಯ ಇಲಾಖೆಯ ಕಾರ್ಯ ವೈಫಲ್ಯದಿಂದ ಬಡವರಿಗೆ ಹಾಗೂ ಜನಸಾಮಾನ್ಯರಿಗೆ ತೊಂದರೆಯಾಗಿರುವುದರಿಂದ ರಾಜ್ಯದಲ್ಲಿ ಸಮಗ್ರ ಆರೋಗ್ಯ ನೀತಿಯನ್ನು ರೂಪಿಸುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

9. **ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಸಂಜಯ ಬಿ. ಪಾಟೀಲ್, ಡಾ॥ ವಿಶ್ವನಾಥ ಈ ಪಾಟೀಲ, ಲಕ್ಷ್ಮಣ ಸಂಗಪ್ಪ ಸವದಿ, ಪ್ರಭು ಚವ್ಹಾಣ್ ಮತ್ತು** ಇತರರು – ಬೆಳಗಾವಿಯ ಹಲಗಾ ಗ್ರಾಮದಲ್ಲಿ ಸ್ಥಾಪಿಸಲಾಗಿರುವ ಒಳಚರಂಡಿ ನೀರಿನ ಶುದ್ಧೀಕರಣ ಘಟಕದಿಂದ ರೈತರ ಬಾವಿಗಳಿಗೆ ಕೊಳಚೆ ನೀರು ಬಿಡುತ್ತಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವುದರಿಂದ ಶುದ್ಧೀಕರಣ ಘಟಕವನ್ನು ಸ್ಥಳಾಂತರಿಸುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

10. **ಶ್ರೀಯುತರುಗಳಾದ ಕ್ಯಾತಸಂದ್ರ ಎನ್. ರಾಜಣ್ಣ, ಎಂ.ಟಿ. ಕೃಷ್ಣಪ್ಪ, ಸಿ.ಟಿ. ರವಿ, ಲಕ್ಷ್ಮಣ ಸಂಗಪ್ಪ ಸವದಿ, ಗೋವಿಂದ ಎಂ ಕಾರಜೋಳ ಮತ್ತು** ಇತರರು –ವಿಧಾನಸಭಾ ಸದಸ್ಯರುಗಳು ವಿವಿಧ ಇಲಾಖೆಯ ಫಲಾನುಭವಿಗಳ ಆಯ್ಕೆಯನ್ನು ತಮ್ಮ ಮನೆಯಲ್ಲಿ ಕುಳಿತು ಮನಬಂದಂತೆ ಆಯ್ಕೆ ಪಟ್ಟಿಯನ್ನು ತಯಾರಿಸುತ್ತಾರೆಂದು ಮಾಡಿರುವ ಆರೋಪದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯ

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು ದಿನಾಂಕ:03.12.2016 ರಂದು ಮಂಡಿಸಿದ್ದ ನಿರ್ಣಯದ ಮೇಲೆ ಚರ್ಚೆ.

"ಸತತವಾದ ಬರದಿಂದ ಕಂಗೆಟ್ಟಿರುವ ರಾಜ್ಯದ ರೈತರ, ಕೃಷಿ ಕಾರ್ಮಿಕರ ಮತ್ತು ಗ್ರಾಮೀಣ ಭಾಗದ ಸ್ವಸಹಾಯ ಸಂಘಗಳ ಸಹಕಾರಿ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳು ಮತ್ತು ವಿವಿಧ ನಿಗಮ ಮಂಡಳಿಗಳಿಂದ ಪಡೆದ ಸಾಲವನ್ನು ಸಂಪೂರ್ಣ ಮನ್ನಾ ಮಾಡುವುದು, ಬೆಳೆಗಳಿಗೆ ಕೃಷಿ ಬೆಲೆ ನಿಗದಿ ಆಯೋಗ ಲೆಕ್ಕ ಹಾಕಿರುವ ಖರ್ಚು ಮತ್ತು ಅದರ ಮೇಲೆ ರಾಷ್ಟ್ರೀಯ ರೈತ ಆಯೋಗದ ಶಿಫಾರಸ್ಸಿನಂತೆ ವೈಜ್ಞಾನಿಕ ಪರಿಹಾರ ಕೊಡುವುದು ಹಾಗೂ 2009ರ ಕೇಂದ್ರ ಸರ್ಕಾರದ 'ರಾಷ್ಟ್ರೀಯ ಬರ ನಿರ್ವಹಣೆ ಮಾರ್ಗಸೂಚಿ'ಯನ್ವಯ ಬರ ನಿರ್ವಹಣೆ ಮಾಡುವುದು ಈ ಮೂರು ಸೇರಿದಂತೆ ವಿಶೇಷ ಪ್ಯಾಕೇಜ್‌ನ ಒಟ್ಟು ಅರ್ಥಿಕ ಜವಾಬ್ದಾರಿಯಲ್ಲಿ ಶೇಕಡ 35 ರಷ್ಟು ರಾಜ್ಯ ಸರ್ಕಾರವು ವಹಿಸಿಕೊಳ್ಳಬೇಕೆಂದು ಮತ್ತು ಶೇಕಡ 65ರಷ್ಟನ್ನು ಕೇಂದ್ರ ಸರ್ಕಾರ ನೀಡಬೇಕೆಂದು ಒತ್ತಾಯಿಸುವ ಬಗ್ಗೆ " ಈ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm